**ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಕೆ.ಆರ್.ನಗರ**

ಸಿಸಿ ನಂ. **107/2025**

**ಪಿರ್ಯಾದುದಾರರುಃ** ಶ್ರೀ ಶಿವಣ್ಣ ಬಿನ್ ಲೇಟ್ ಸುಬ್ಬೇಗೌಡ,

**--ವಿರುದ್ಧ –**

**ಆರೋಪಿಃ** ಶ್ರೀಮತಿ ಲಲಿತ ಕೋಂ ಲೇಟ್ ಬಿರೇಶ್

**ಃಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಕಲಂ 355 ರಡಿಯಲ್ಲಿ ಆರೋಪಿಯ ಹೇಳಿಕೆಃ**

ಪ್ರಶ್ನೆ-1 ಫ್ರಾಸಾ-1 ಶ್ರೀ ಶಿವಣ್ಣ ಬಿನ್ ಲೇಟ್ ಸುಬ್ಬೇಗೌಡ, ರವರು ತಮ್ಮ ಸ್ವ ಇಚ್ಛಾ ಹೇಳಿಕೆಯಲ್ಲಿ ಆರೋಪಿಯಾದ ನೀವು ಫ್ರಾಸಾ-1 ರವರಿಗೆ ರೂ.2,50,000/-ಹಣವನ್ನು ಕಾನೂನು ಬದ್ಧವಾಗಿ ಕೊಡಬೇಕಾಗಿದ್ದು, ಅದರ ಮರು ಪಾವತಿಗಾಗಿ ನಿಮ್ಮ ಉಳಿತಾಯ ಖಾತೆ ಇರುವ **ಸೂರ್ಯೋದಯ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿ., ಕೆ ಆರ್ ನಗರ ಶಾಖೆಗೆ** ಸೇರಿದ ಚೆಕ್ ಸಂಖ್ಯೆ 000004 **ದಿನಾಂಕ:** 03.02.2025 ವನ್ನು ನಮೂದಿಸಿ ಕೊಟ್ಟಿದ್ದೀರೆಂದು ಸಾಕ್ಷ್ಯ ನುಡಿದಿರುತ್ತಾರೆ, ನೀವೇನು ಹೇಳುವಿರಿ?

ಉತ್ತರಃ

ಪ್ರಶ್ನೆ-2 ಫ್ರಾಸಾ-1 ಶ್ರೀ ಶಿವಣ್ಣ ಬಿನ್ ಲೇಟ್ ಸುಬ್ಬೇಗೌಡ, ರವರು ತಮ್ಮ ಸ್ವ ಇಚ್ಛಾ ಹೇಳಿಕೆಯಲ್ಲಿ ಮುಂದುವರೆದು ಸದರಿ ಚೆಕ್ಕನ್ನು ನಗದೀಕರಿಸಿಕೊಳ್ಳಲು, ತಮ್ಮ ಉಳಿತಾಯ ಖಾತೆ ಇರುವ **ಕರ್ನಾಟಕ ಗ್ರಾಮೀಣ ಬ್ಯಾಂಕ್, ಹಂಪಾಪುರ ಶಾಖೆ,** ಇಲ್ಲಿಗೆ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು **"ಸಾಕಷ್ಟು ಹಣವಿಲ್ಲ"** ಎಂಬ ಹಿಂಬರಹದೊಂದಿಗೆ ದಿನಾಂಕ: 19.02.2025 ರಂದು ಚೆಕ್ಕು ಹಿಂದಿರುಗಿತು ಎಂದು ಸಾಕ್ಷ್ಯ ನುಡಿದಿರುತ್ತಾರೆ, ನೀವೇನು ಹೇಳುವಿರಿ?

ಉತ್ತರಃ

ಪ್ರಶ್ನೆ-3 ಫ್ರಾ.ಸಾ.-1 ಶ್ರೀ ಶಿವಣ್ಣ ಬಿನ್ ಲೇಟ್ ಸುಬ್ಬೇಗೌಡ, ರವರು ತಮ್ಮ ಸ್ವ ಇಚ್ಛಾ ಹೇಳಿಕೆಯಲ್ಲಿ ಮುಂದುವರೆದು ಅವರು ತಮ್ಮ ವಕೀಲರ ಮುಖಾಂತರ ಆರೋಪಿಯಾದ ನಿಮಗೆ ನೊಂದಾಯಿತ ಅಂಚೆ ಮೂಲಕ ದಿನಾಂಕ: 24.02.2025 ರಂದು ತಿಳುವಳಿಕೆ ಪತ್ರ ಕಳುಹಿಸಿದರೂ ಸಹ ನೀವು ಕಾನೂನುಬದ್ಧವಾಗಿ ಪಾವತಿ ಮಾಡಬೇಕಾದ ಹಣವನ್ನು ಮರುಪಾವತಿ ಮಾಡಿರುವುದಿಲ್ಲ. ಆದ್ದರಿಂದ ನಿಮ್ಮ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಸಾಕ್ಷ್ಯ ನುಡಿದಿರುತ್ತಾರೆ, ನೀವೇನು ಹೇಳುವಿರಿ?

ಉತ್ತರಃ

ಪ್ರಶ್ನೆ:4 ನಿಮಗೆ ಬೇರೆ ಏನಾದರೂ ಹೇಳುವುದು ಇದೆಯಾ?
ಉತ್ತರ:

ಪ್ರಶ್ನೆ: 5 ನಿಮ್ಮ ಪರ ಸಾಕ್ಷಿದಾರರು ಇದ್ದಾರೆಯೆ?
ಉತ್ತರ:

(ಮೇಲ್ಕಂಡ ಆರೋಪದ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ಅರ್ಥವಾಗುವ ಭಾಷೆಯಲ್ಲಿ ಓದಿ ಹೇಳಿ ಆರೋಪಿ ನೀಡಿದ ಉತ್ತರಗಳನ್ನು ಸ್ವತಃ ನಾನೇ ಕೇಳಿಸಿಕೊಂಡು ನನ್ನ ಸ್ವ ಬರವಣಿಗೆಯಲ್ಲಿ ಉತ್ತರಗಳನ್ನು ನಮೂದು ಮಾಡಿರುತ್ತೇನೆ ಇವು ಆರೋಪಿ ತನ್ನ ಸ್ವಇಚ್ಛೆಯಿಂದ ನೀಡಿರುವ ಉತ್ತರಗಳಾಗಿರುತ್ತವೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)

**ದಿನಾಂಕ: 06.10.2025**

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕೆ ಆರ್ ನಗರ.**